# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 195 (1387)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಸಹಕಾರ ಸಚಿವರು

ವಿಷಯ : ಸಹಕಾರ ಸಂಘಗಳ ಸದಸ್ಯತ್ವ ಅಭಿಯಾನದ ಬಗ್ಗೆ

(ಅ) ಸಹಕಾರ ಸಂಘಗಳಲ್ಲಿ ಸದಸ್ಯರನ್ನು ಮುಕ್ತ ಸದಸ್ಯತ್ವದಿಂದ ವಂಚಿಸಿ, ಸದಸ್ಯರ ಮತದಾನದ ಹಕ್ಕನ್ನು ಮೊಟಕುಗೊಳಿಸುವ ಉದ್ದೇಶದಿಂದ ನಾಮ ಮಾತ್ರ ಸದಸ್ಯರನ್ನು ಮಾಡಿ, ವ್ಯವಹರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಹಕಾರ ಸಂಘಗಳಲ್ಲಿ ಸದಸ್ಯತ್ವ ಅಭಿಯಾನ ಮಾಡದೆ, ಆಡಳಿತ ಮಂಡಳಿಯ ಸಹಕಾರ ತತ್ವಕ್ಕೆ ವಿರುದ್ದವಾಗಿ ಕೆಲವೇ ಮಂದಿಯನ್ನು ಸದಸ್ಯರನ್ನಾಗಿ ಮಾಡಿಕೊಂಡು, ಕೆಲವೇ ಮಂದಿಗೆ ಸಾಲಸೌಲಭ್ಯ ನೀಡುತ್ತಿರುವುದು ಹಾಗೂ ಕೆಲವೇ ಮಂದಿಯನ್ನು ಸದಸ್ಯರನ್ನಾಗಿ ಮಾಡಿಕೊಂಡು ಚುನಾವಣೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸಹಕಾರ ಸಂಘಗಳಲ್ಲಿ ಸದಸ್ಯತ್ವ ಅಭಿಯಾನ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಸಹಕಾರ ತತ್ವಕ್ಕೆ ವ್ಯತಿರಿಕ್ತವಾಗಿ ನಾಮನಿರ್ದೇಶಿತ ಸದಸ್ಯರನ್ನು ಸಹಕಾರ ಸಂಘಗಳ ಅಧ್ಯಕ್ಷ/ಉಪಾಧ್ಯಕ್ಷರ ಹುದ್ದೆಗೆ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ವ್ಯವಸ್ಥೆಯನ್ನು ಕೊನೆಗಾಣಿಸಿ, ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಸಹಕಾರ ತತ್ವಕ್ಕೆ ಅನುಗುಣವಾಗಿ ಚುನಾಯಿತ ಸದಸ್ಯರಿಗೆ ಮಾತ್ರ ಆಡಳಿತ ಮಂಡಳಿ ಪದಾಧಿಕಾರಿಗಳನ್ನಾಗಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?